**ಪಿ.ಡಬ್ಲ್ಯೂಃ 1**

**ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 25-07-2023 ರಂದು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಆರ್ ಆರ್ ಹೆಚ್ ನ್ಯಾಯವಾದಿರವರಿಂದಃ**

ನಾನು ಸಲ್ಲಿಸುತ್ತಿರುವ ಪ್ರಮಾಣ ಪತ್ರದಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣ ಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಸಾಕ್ಷಿಯು ದಾವಾ ಸ್ವತ್ತಗಳಿಗೆ ಸಂಬಂಧಿಸಿದಂತೆ 4 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು , ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 4 ಎಂದು ಗುರುತಿಸಲಾಯಿತು . ಕುಟುಂಬದ ವಂಶ ವೃಕ್ಷವನ್ನು ಹಾಜರುಪಡಿಸಿದ್ದು , ಅದನ್ನು ನಿಪಿ-5 ಎಂದು ಗುರುತಿಸಲಾಯಿತು . ದಾವಾ ಸ್ವತ್ತಿಗೆ ಸಂಬಂಧಿಸಿದಂತೆ 2 ಗಣಕೀಕೃತ ಎಂ ಆರ್ ವಹಿ ಮತ್ತು 2 ಕೈ ಬರವಣಿಗೆ ಎಂ ಆರ್ ವಹಿಯ ದಾಖಲೆಗಳನ್ನು ಹಾಜರುಪಡಿಸಿದ್ದು , ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ 9 ಎಂದು ಗುರುತಿಸಲಾಯಿತು . ಸಹಾಯ ಆಯುಕ್ತರು ಶಿರಸಿ ಉಪವಿಭಾಗ ನ್ಯಾಯಾಲಯದಲ್ಲಿ ಆದ ಆದೇಶದ ದೃಡಿಕೃತ ದಾಖಲೆ , ಅಸಲು ದಾವಾ ಸಂಖ್ಯೆ 10/2018 ರ ಆದೇಶದ ದೃಢಿಕೃತ ಹಾಳೆಗಳು ಮತ್ತು ಅದರ ವಾದ ಪತ್ರ , 2 ಪ್ರತಿವಾದ ಹೇಳಿಕೆ ಮತ್ತು ಅದರ ವಿವಾದಾಂಶದ ದೃಢಿಕೃತ ದಾಖಲೆಗಳನ್ನು ಹಾಜರುಪಡಿಸಿದ್ದು , ಅವುಗಳನ್ನು ಕ್ರಮವಾಗಿ ನಿಪಿ-10 ರಿಂದ 15 ಎಂದು ಗುರುತಿಸಲಾಯಿತು .

ಈ ಹಂತದಲ್ಲಿ ವಾದಿ ಪರ ನ್ಯಾಯಾವಾದಿರವರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

**(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ,**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**